1ನೇ **ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಸಾಗರ**

**ಸಿಸಿ ನಂಬರು** 1948/2021

**ಸಿ.ಡಬ್ಲು -5, ಪಿ.ಡಬ್ಲು -5**

**ಸಾಕ್ಷಿದಾರರ ಹೆಸರು** : ರಾಜು
ತಂದೆಯ **ಹೆಸರು** : ರಾಮಪ್ಪ
**ವಯಸ್ಸು** : 55 ವರ್ಷ
**ಉದ್ಯೋಗ** : ವ್ಯವಸಾಯ
**ವಾಸ** : ಸಾಗರ ತಾಲ್ಲೂಕು.

**ಪ್ರಮಾಣೀಕರಿಸಿದ** ದಿನಾಂಕ :01.12.2025

**ಮುಖ್ಯ ವಿಚಾರಣೆ : ಸಸಅ ರಿಂದ**

1. ಸುಮಾರು 2-3 ವರ್ಷಗಳ ಹಿಂದೆ ಪೊಲೀಸರು ಠಾಣೆಯಲ್ಲಿ ಯಾವುದೋ ದಾಖಲೆಯ ಮೇಲೆ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ನನ್ನ ಸಹಿಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನಿಪಿ 5 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 5(ಸಿ) ಎಂದು ಗುರುತಿಸಲಾಯಿತು. ಪೊಲೀಸರು ನನ್ನ ಸಮಕ್ಷಮ ಯಾವುದೇ ಅಮಾನತು ಪಂಚನಾಮೆಯನ್ನು ನಡೆಸಿರುವುದಿಲ್ಲ ಮತ್ತು ಯಾವುದೇ ವಸ್ತುಗಳನ್ನು ಜಪ್ತು ಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಪಂಚನಾಮೆಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)**

ಪಾಟೀ ಸವಾಲುಃ- ಸ.ಸ.ಅ. ರವರಿಂದಃ-

1. ಈಗ ಓದಿ ಹೇಳಿದ ನಿಪಿ 5 ರಂತೆ ಪೊಲೀಸರು ನನ್ನ ಸಮಕ್ಷಮ ಸಿ ಡಿ ಅಮಾನತು ಪಂಚನಾಮೆಯ ಕ್ರಮವನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ವಿಷಯ ಗೊತ್ತಿದ್ದರೂ ಆರೋಪಿಗೆ ಸಹಾಯವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.

**ಮರು ವಿಚಾರಣೆಃ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**

**ಓದಿ ಹೇಳಿ ಕೇಳಿ ಸರಿ ಇದೆ**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.